ವಿಯು-72
ಕ್ರಮಸಂಖ್ಯೆ-32

ಕರ್ನಾಟಕ ಸರ್ಕಾರ

ಕಡತ ಸಂಖ್ಯೆ: ಲೋಇ 41 ಬಿಎಲ್ ಕ್ಯೂ 2021

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 19.11.2021.

ಇವರಿಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಲೋಕೋಪಯೋಗಿ ಇಲಾಖೆ,
ವಿಕಾಸ ಸೌಧ, ಬೆಂಗಳೂರು.

ಇವರಿಗೆ,
ಕಾರ್ಯದರ್ಶಿ,
ಕರ್ನಾಟಕ ಪರಿಷತ್ತು,
ವಿಧಾನಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ವೈ.ಎ. ನಾರಾಯಣ ಸ್ವಾಮಿ ಇವರ ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ ನೀಡುವ ಕುರಿತು.

ಉಲ್ಲೇಖ: ಕಾರ್ಯದರ್ಶಿ(ಪ್ರ), ಕರ್ನಾಟಕ ವಿಧಾನ ಪರಿಷತ್ತು ಇವರ ಪತ್ರ ಸಂಖ್ಯೆ: ಕವಿಪ/ಪ್ರಶಾ/32/144ನೇಅ/ನಿ-72/2021, ದಿನಾಂಕ:08/09/2021.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಕೋರಲಾಗಿರುವಂತೆ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ವೈ.ಎ. ನಾರಾಯಣ ಸ್ವಾಮಿ ಇವರ ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಸಂಬಂಧಿಸಿದಂತೆ, ಲೋಕೋಪಯೋಗಿ ಇಲಾಖೆಯ ಉತ್ತರದ 30 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗಿದೆ.

ತಮ್ಮ ವಿಶ್ವಾಸಿ,

19-11-2021
(ಎನ್.ಎ. ರಾಜೇಶ್ವರಿ),
ಸರ್ಕಾರದ ಅಧೀನ ಕಾರ್ಯದರ್ಶಿ,
ಲೋಕೋಪಯೋಗಿ ಇಲಾಖೆ (ಕಟ್ಟಡಗಳು).

ನಿಯಮ - 72
ಕ್ರಮಸಂಖ್ಯೆ - 32

# ಕರ್ನಾಟಕ ವಿಧಾನ ಪರಿಷತ್ತು

## ಶ್ರೀ ಡಾ|| ವೈ.ಎ. ನಾರಾಯಣ ಸ್ವಾಮಿ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು, ಇವರ ನಿಯಮ - 72 ರಡಿ ಗಮನ ಸೆಳೆಯುವ ಸೂಚನೆಗೆ ಲೋಕೋಪಯೋಗಿ ಇಲಾಖೆಯ ಮಾಹಿತಿ

**ವಿಷಯ:** ಭಾರತ ದೇಶದ ಅತ್ಯಂತ ಪ್ರತಿಷ್ಠಿತ ಇಂಜಿನಿಯರಿಂಗ್ ಸಂಸ್ಥೆಯಾದ "ಇನ್ಸಿಟ್ಯೂಟ್ ಆಫ್ ಇಂಜಿನಿಯರ್", ಕರ್ನಾಟಕ ಈ ಸಂಸ್ಥೆಗೆ ಬೀಗ ಹಾಕಿರುವುದರಿಂದ, ಈ ಸಂಸ್ಥೆಯ ದೈನಂದಿನ ಕಾರ್ಯ ಚಟುವಟಿಕೆಗಳಿಗೆ ಹಾಗೂ ತಾಂತ್ರಿಕ ನೈಪುಣ್ಯತೆ ನೀಡುವ ಶೈಕ್ಷಣಿಕ ವ್ಯವಸ್ಥೆಗೆ ದಕ್ಕೆ ಉಂಟಾಗಿರುವ ಗಂಭೀರ ವಿಚಾರವನ್ನು ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುತ್ತೇನೆ.

*****

**ಉತ್ತರ:** ಲೋಕೋಪಯೋಗಿ ಇಲಾಖೆಗೆ ಸೇರಿದ ಬೆಂಗಳೂರಿನ ಡಾ|| ಅಂಬೇಡ್ಕರ್ ವೀದಿಯಲ್ಲಿರುವ ನಿವೇಶನ ಸಂಖ್ಯೆ:3ರಲ್ಲಿರುವ ಸುಮಾರು 3300 ಚದರ ಯಾರ್ಡ್ ಜಾಗವನ್ನು ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್ (ಇಂಡಿಯಾ) ಸಂಸ್ಥೆಗೆ 30 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದ ಮೇಲೆ ದಿನಾಂಕ: 06-08-1960ರ ಆದೇಶದನ್ವಯ ಮಂಜೂರು ಮಾಡಲಾಗಿರುತ್ತದೆ.

ತದನಂತರ, ದಿನಾಂಕ: 10-06-1992ರ ಆದೇಶದನ್ವಯ ದಿನಾಂಕ:. 07-08-1992 ರಿಂದ 30 ವರ್ಷಗಳ ಅವಧಿಗೆ ಗುತ್ತಿಗೆಯನ್ನು ನವೀಕರಿಸಿ ಬಾಡಿಗೆಯನ್ನು ಪರಿಷ್ಕರಿಸಿ, ದಿನಾಂಕ: 31-08-2020ರ ವರೆಗೆ ನೀಡಲಾಗಿರುತ್ತದೆ. ಸದರಿ ಸಂಸ್ಥೆಗೆ ಸೇವಾ ಮತ್ತು ಶೈಕ್ಷಣಿಕ ಕಾರ್ಯ ಚಟುವಟಿಕೆಗಳ ನಡೆಸುವ ಉದ್ದೇಶಕ್ಕಾಗಿ ಕಟ್ಟಡವನ್ನು ಗುತ್ತಿಗೆ ನೀಡಲಾಗಿರುತ್ತದೆ. ಆದರೆ, ಈ ಸಂಸ್ಥೆಯವರು ಗುತ್ತಿಗೆ ಕರಾರನ್ನು ಉಲ್ಲಂಘಿಸಿ ಉಪ ಕರಾರು ಹಾಗೂ ವಾಣಿಜ್ಯ ಚಟುವಟಿಕೆಗಳಿಗಾಗಿ ಸದರಿ ಸಂಸ್ಥೆಯ ಆವರಣವನ್ನು ಬಾಡಿಗೆಗೆ ನೀಡಿರುತ್ತದೆ. ಈ ಕಾರಣಕ್ಕಾಗಿ ಸಂಸ್ಥೆಗೆ ಹಲವಾರು ಬಾರಿ ನೋಟೀಸ್ ಸಹ ನೀಡಲಾಗಿರುತ್ತದೆ.

ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್ (ಇಂಡಿಯಾ) ಇವರ ಲೀಸ್ ಕರಾರು ಅವಧಿಯು 2020ನೇ ಆಗಸ್ಟ 31ರಂದು ಮುಕ್ತಾಯಗೊಂಡಿರುತ್ತದೆ. ಸದರಿ ಸಂಸ್ಥೆಯು ಕಟ್ಟಡವನ್ನು ಖಾಸಗಿಯವರಿಗೆ ಬಾಡಿಗೆಗೆ ನೀಡಿದ್ದು, ಕರಾರುಗಳನ್ನು ಉಲ್ಲಂಘಿಸಿರುವುದು ಸ್ಪಷ್ಟವಾಗಿ ಕಂಡುಬಂದಿರುತ್ತದೆ. ಅದರಂತೆ, ನಿವೇಶನದ ಗುತ್ತಿಗೆಯನ್ನು ನವೀಕರಿಸುವುದು ಸೂಕ್ತವಾಗಿರುವುದಿಲ್ಲವೆಂದು ತೀರ್ಮಾನಿಸಿ, ದಿನಾಂಕ:31-08-2020 ರ ಆದೇಶದನ್ವಯ ಬೆಂಗಳೂರಿನ ಡಾ|| ಅಂಬೇಡ್ಕರ್ ವೀದಿಯಲ್ಲಿರುವ ನಿವೇಶನ ಸಂಖ್ಯೆ:3ರ ಕಟ್ಟಡವನ್ನು ಸಂಸ್ಥೆಯ ನೌಕರರ ಮತ್ತು ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಉಪಸ್ಥಿತಿಯಲ್ಲಿ ಮಹಜರ್ ನೊಂದಿಗೆ ಲೋಕೋಪಯೋಗಿ ಇಲಾಖೆಯ ವಶಕ್ಕೆ ಪಡೆಯಲಾಗಿರುತ್ತದೆ.

ಸಂಖ್ಯೆ: ಲೋಇ 41 ಬಿಎಲ್ ಕ್ಯೂ 2021

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು.